## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ/ಏ19/03/2019-20 ದಿನಾಂಕ: 22.05.2019

ಗೆ,
ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ)
ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಮಾನ್ಯರೆ

ವಿಷಯ: ಜೂನ್-2019ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುವ ಪುನರಾವರ್ತಿತ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಪಾವತಿಸಲು ದಿನಾಂಕವನ್ನು ವಿಸ್ತರಿಸುವ ಬಗ್ಗೆ.
ಉಲ್ಲೇಖ:- ಮಂಡಳಿ ಅಧಿಸೂಚನೆ ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಜೂನ್-2019/ಅಧಿಸೂಚನೆ/03/2019-20 ದಿನಾಂಕ:29.04.2019

*******

ಜೂನ್-2019ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುವ ಪುನರಾವರ್ತಿತ ಅಭ್ಯರ್ಥಿಗಳ (CCERR, CCEPR, NSR ಮತ್ತು NSPR) ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸಲು ದೂರವಾಣಿಯ ಮುಖಾಂತರ / ಖುದ್ದಾಗಿ ಕೆಲವು ಅಭ್ಯರ್ಥಿಗಳು/ಪೋಷಕರು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಗೆ ಮನವಿ ಮಾಡಿರುತ್ತಾರೆ.

ಈ ಸಂಬಂಧ **ಪುನರಾವರ್ತಿತ ಅಭ್ಯರ್ಥಿಗಳ (CCERR, CCEPR, NSR ಮತ್ತು NSPR)** ಪರೀಕ್ಷಾ ಶುಲ್ಕವನ್ನು ಪಾವತಿಸಲು ಈ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಿದೆ. ಆದ್ದರಿಂದ ಅಂತಿಮ ದಿನಾಂಕದೊಳಗೆ ಎಲ್ಲಾ ಅರ್ಹ ಪುನರಾವರ್ತಿತ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಪಾವತಿ ಮಾಡುವಂತೆ ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) / ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಜಿಲ್ಲಾ ವ್ಯಾಪ್ತಿಗೆ ಬರುವ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ತಿಳಿಸುವುದು. ಹಾಗೂ ಜಿಲ್ಲೆ/ತಾಲ್ಲೂಕು ವ್ಯಾಪ್ತಿಯ ಸ್ಥಳೀಯ ದಿನಪತ್ರಿಕೆ ಹಾಗೂ ಇತರೆ ಮಾಧ್ಯಮಗಳ ಮೂಲಕ ಸದರಿ ವಿಷಯದ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರು/ಪೋಷಕರು/ವಿದ್ಯಾರ್ಥಿಗಳ ಗಮನಕ್ಕೆ ಬರುವಂತೆ ವ್ಯಾಪಕ ಪ್ರಚಾರವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದು. ಪುನ: ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕ ವಿಸ್ತರಣೆಯನ್ನು ಮಾಡಲಾಗುವುದಿಲ್ಲ.

| ಕ್ರ ಸಂ | ವಿವರ | **ಈ ಹಿಂದೆ ನಿಗದಿಪಡಿಸಿದ್ದ ದಿನಾಂಕ** | **ವಿಸ್ತರಣೆ ಮಾಡಿದ ಕೊನೆಯ ದಿನಾಂಕ** |
|---|---|---|---|
| 1 | ಪ್ರತಿ ಅಭ್ಯರ್ಥಿಗೆ ರೂ.500/-ರ ದಂಡ ಶುಲ್ಕದೊಂದಿಗೆ ಪರೀಕ್ಷಾರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಲು ಮತ್ತು ಅನ್‌ಲೈನ್‌ನಲ್ಲಿ ಅಭ್ಯರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು **ಕೊನೆಯ** ದಿನಾಂಕ: | 20.05.2019 | 25.05.2019 |
| 2 | ದಿನಾಂಕ:21.05.2019 ರಿಂದ ದಿ:25.05.2019ರವರೆಗೆ ಅನ್‌ಲೈನ್‌ನಲ್ಲಿ ಅಭ್ಯರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಿದ ಪ್ರಕರಣಗಳ ಶುಲ್ಕವನ್ನು ಈ ಹಿಂದಿನ ಸಾಲಿನಂತೆ ಮಂಡಳಿಯ NEFT ಚಲನ್ ಮೂಲಕ ಬ್ಯಾಂಕಿಗೆ ಪಾವತಿಸಲು **ಕೊನೆಯ** ದಿನಾಂಕ: | 21.05.2019 | 27.05.2019 |
| 3 | NEFT ಚಲನ್ ಮೂಲಕ ಪರೀಕ್ಷಾ ಶುಲ್ಕವನ್ನು ಬ್ಯಾಂಕ್‌ಗೆ ಪಾವತಿಸಿದ ಬ್ಯಾಂಕ್‌ನ ಮೂಲ ಚಲನ್ ಪ್ರತಿ ಮತ್ತು ಇತರೆ ದಾಖಲೆಗಳನ್ನು ಮಂಡಳಿಗೆ ತಲುಪಿಸಲು **ಕೊನೆಯ** ದಿನಾಂಕ: | 22.05.2019 | 28.05.2019 |

**ವಿಶೇಷ ಸೂಚನೆ:- ದಿನಾಂಕ:16.05.2019 ರಿಂದ ದಿ:25.05.2019ರವರೆಗೆ ಅನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಿದ ಪ್ರಕರಣಗಳಿಗೆ ಆನ್‌ಲೈನ್‌ನಲ್ಲಿ ಬ್ಯಾಂಕ್ ಚಲನ್ ಜನರೇಟ್ ಆಗುವುದಿಲ್ಲ. ಬದಲಿಗೆ ಸದರಿ ದಂಡಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ಈ ಹಿಂದಿನ ಸಾಲಿನಂತೆ ಮಂಡಳಿಯ NEFT ಚಲನ್‌ನಲ್ಲಿ ಭರ್ತಿಮಾಡಿ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಜಮೆ ಮಾಡುವುದು.**

ತಮ್ಮ ನಂಬುಗೆಯ,

(ಮಾನ್ಯ ನಿರ್ದೇಶಕರು (ಪರೀಕ್ಷೆಗಳು)ರವರ ಆದೇಶಾನುಸಾರ)

ಕಾರ್ಯದರ್ಶಿಗಳು

A8_letter1